**ಕರ್ನಾಟಕ ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆ.**

**ವಿಷಯ**

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ, ವೇತನ ಹೆಚ್ಚಳ ಹಾಗೂ ನಿಗಧಿತ ಸಮಯದಲ್ಲಿ ವೇತನ ಬಿಡುಗಡೆ ಮಾಡುವ ಕುರಿತು ಹಾಗೂ ಅವರ ಇನ್ನಿತರೆ ಸಮಸ್ಯೆಗಳನ್ನು ಪರಿಹರಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

**ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಬಗ್ಗೆ:**

ಸರ್ಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಸಂಖ್ಯೆಗೆ ಅನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಆಯಾ ಕಾಲೇಜಿನ ಖಾಯಂ ಅಧ್ಯಾಪಕರುಗಳಿಗೆ ಹಂಚಿಕೆ ಮಾಡಿ, ತದನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ ತಾತ್ಕಾಲಿಕವಾಗಿ ಕಲಾ ಮತ್ತು ವಾಣಿಜ್ಯ ವಿಷಯಕ್ಕೆ ವಾರಕ್ಕೆ ಗರಿಷ್ಠ 8 ಗಂಟೆ ಹಾಗೂ ವಿಜ್ಞಾನ ವಿಷಯಕ್ಕೆ 10 ಗಂಟೆಗಳ ಕಾರ್ಯಭಾರಕ್ಕೆ ಒಬ್ಬರಂತೆ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತಿದೆ. ಅಲ್ಲದೆ, ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಮಾತ್ರ ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಯಾವುದೇ ಖಾಲಿ ಹುದ್ದೆಗಳಿಗೆ ಅಥವಾ ಪೂರ್ಣಕಾಲಿಕ ಕಾರ್ಯಭಾರಕ್ಕೆ ನೇಮಕಾತಿ ಮಾಡಿಕೊಳ್ಳಲಾಗುತ್ತಿಲ್ಲ. ಆದ್ದರಿಂದ ಅವರುಗಳ ತಾತ್ಕಾಲಿಕ ಸೇವೆಯನ್ನು ಪರಿಗಣಿಸಿ ಸೇವಾ ಭದ್ರತೆಯನ್ನು ಒದಗಿಸಲು ಪ್ರಸ್ತುತ ಜಾರಿಯಲ್ಲಿರುವ ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

**ಅತಿಥಿ ಉಪನ್ಯಾಸಕರ ವೇತನ ಹೆಚ್ಚಳದ ಕುರಿತು:**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 66 ಡಿಸಿಇ 2017, ದಿನಾಂಕ: 04.04.2017ರನ್ವಯ ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 55 ರಷ್ಟು ಅಂಕಗಳೊಂದಿಗೆ ಎನ್.ಇ.ಟಿ./ಎಸ್.ಎಲ್.ಇ.ಟಿ/ ಪಿ.ಹೆಚ್.ಡಿ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ರೂ.13,000/- ಮತ್ತು ಸ್ನಾತಕೋತ್ತರ/ಎಂ.ಫಿಲ್ ಪದವಿ ಹೊಂದಿರುವವರಿಗೆ ರೂ.11,000/-ಗಳ ಗೌರವಧನವನ್ನು ಪಾವತಿಸಲಾಗುತ್ತಿದ್ದು, ಪ್ರಸ್ತುತ, ಪಾವತಿಸಲಾಗುತ್ತಿರುವ ಮಾಸಿಕ ಗೌರವಧನದ ಮೊತ್ತವನ್ನು ಪರಿಷ್ಕರಿಸಲು ರಾಜ್ಯದಲ್ಲಿ ತಲೆದೂರಿರುವ ಕೋವಿಡ್-19 ಹಿನ್ನಲೆಯಲ್ಲಿ ಉಂಟಾಗಿರುವ ಆರ್ಥಿಕ

ಮುಗ್ಗಟ್ಟಿನ ಹಾಗೂ ಈ ಸಂಬಂಧ ಇರುವ ಆರ್ಥಿಕ ನಿರ್ಬಂಧನೆಯ ಕಾರಣ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವವರಿಗೆ ಗೌರವಧನ ಹೆಚ್ಚಿಸಲು ಸಾಧ್ಯವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

**<u>ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಬಗ್ಗೆ:</u>**

ಸರ್ಕಾರದಿಂದ ಅನುದಾನವನ್ನು 04 ತ್ರೈಮಾಸಿಕ ಕಂತುಗಳಲ್ಲಿ ಬಿಡುಗಡೆ ಮಾಡಲಾಗುತ್ತಿದ್ದು, ಪ್ರತಿ ಕಂತಿನ ಅನುದಾನ ಬಿಡುಗಡೆಯಾದ ಕೂಡಲೇ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಲು ಸಂಬಂಧಿಸಿದ ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಅದರಂತೆ, 2020-21ನೇ ಶೈಕ್ಷಣಿಕ ಸಾಲಿನಲ್ಲಿ ಆಗಸ್ಟ್ 2021ರ ಮಾಹೆಯವರೆಗೂ ಹಾಗೂ 2021-22ನೇ ಶೈಕ್ಷಣಿಕ ಸಾಲಿನಲ್ಲಿ ಅಕ್ಟೋಬರ್ ಮಾಹೆಯಿಂದ ಡಿಸೆಂಬರ್ 2021ರ ಮಾಹೆಗಳಿಗೆ ಅತಿಥಿ ಉಪನ್ಯಾಸಕರಿಗೆ ಗೌರವಧನವನ್ನು ಪಾವತಿಸಲು ಕಾಲೇಜುಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಇಡಿ 231 ಡಿಸಿಇ 2021

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು